## 4. ಬಂಡಾಯ ಶಾಸಕರಿಗೆ ನಾಲ್ಕು ದಿನ ರಿಲೀಫ್

ಸಚಿನ್ ಪೈಲಟ್ ಸೇರಿದಂತೆ ರಾಜಸ್ಥಾನ ಕಾಂಗ್ರೆಸ್‌ನ 19 ಬಂಡಾಯ ಶಾಸಕರಿಗೆ ಹೈಕೋರ್ಟ್ 4 ದಿನಗಳ ರಿಲೀಫ್ ನೀಡಿದೆ. ಅನರ್ಹತೆಯ ನೋಟಿಸ್‌ಗೆ ಸಂಬಂಧಿಸಿದಂತೆ ಬಂಡಾಯ ಶಾಸಕರ ವಿರುದ್ಧ ಸಂಜೆ 5.30ರವರೆಗೂ ವಿಧಾನಸಭೆಯ ಸ್ಪೀಕರ್ ಯಾವುದೇ ಕ್ರಮ ಕೈಗೊಳ್ಳುವಂತಿಲ್ಲ ಎಂದು ರಾಜಸ್ಥಾನ ಹೈಕೋರ್ಟ್ ಹೇಳಿದೆ. ನ್ಯಾಯಾಲಯದ ಈ ಆದೇಶದಿಂದಾಗಿ ಆರಂಭಿಕ ಹೋರಾಟದಲ್ಲಿ ಪೈಲಟ್ ಬಣ ಮುನ್ನಡೆ ಸಾಧಿಸಿದಂತಾಗಿದೆ.

ಜಾರಿ ಮಾಡಲಾಗಿದ್ದ ಅನರ್ಹತೆ ನೋಟಿಸ್ ಪ್ರಶ್ನಿಸಿ ಬಂಡಾಯ ಶಾಸಕರು ಸಲ್ಲಿಸಿದ್ದ ಅರ್ಜಿಯನ್ನು ಸಂಜೆ ವಿಚಾರಣೆ ನಡೆಸಿದ ಕೋರ್ಟ್‌ನ ವಿಭಾಗೀಯ ಪೀಠ ಈ ಆದೇಶ ನೀಡಿದೆ. ಮುಂದಿನ ವಿಚಾರಣೆ ನಡೆಯಲಿದ್ದು, ಅಂದು ಸ್ಪೀಕರ್ ಪರ ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಅವರು ತಮ್ಮ ವಾದವನ್ನು ಮುಂದಿಡಲಿದ್ದಾರೆ.

ಮುಖ್ಯಮಂತ್ರಿಯವರ ಸರ್ವಾಧಿಕಾರಿ ಧೋರಣೆಯನ್ನು ಪ್ರಶ್ನಿಸುವುದು, ಅದಕ್ಕೆ ಪ್ರತಿರೋಧ ಒಡ್ಡುವುದು ಪಕ್ಷಾಂತರವಾಗುವುದಿಲ್ಲ. ಅದು ಶಾಸಕರ ಅಭಿವ್ಯಕ್ತಿ ಸ್ವಾತಂತ್ರ್ಯವಾಗುತ್ತದೆ. ಅಲ್ಲದೇ ಬಂಡಾಯ ಶಾಸಕರು ಸಿಎಂ ಬದಲಾವಣೆಗೆ ಕೋರುತ್ತಿದ್ದಾರೆಯೇ ಹೊರತು, ಸರ್ಕಾರದ ಬದಲಾವಣೆಯನ್ನು ಬಯಸುತ್ತಿಲ್ಲ ಎಂದು ಪೈಲಟ್ ಪರ ವಕೀಲರಾದ ಹರೀಶ್ ಸಾಳ್ವೆ ವಾದಿಸಿದ್ದಾರೆ.

**ಎಫ್‌ಐಆರ್:** ರಾಜಸ್ಥಾನದ ರಾಜಕೀಯ ಬಿಕ್ಕಟ್ಟಿಗೆ ಸಂಬಂಧಿಸಿದಂತೆ ಹಲವು ಬೆಳವಣಿಗೆಗಳು ನಡೆದಿವೆ. ಶಾಸಕರನ್ನು ಖರೀದಿಸುವ ಮೂಲಕ ಸರ್ಕಾರವನ್ನು ಉರುಳಿಸಲು ಬಿಜೆಪಿ ಯತ್ನಿಸುತ್ತಿದೆ ಎಂದು ಹೇಳಲಾದ ಆಡಿಯೋ ಕ್ಲಿಪ್‌ಗಳನ್ನು ಕಾಂಗ್ರೆಸ್ ಬಿಡುಗಡೆ ಮಾಡಿದೆ. ಜೊತೆಗೆ ದೂರನ್ನೂ ನೀಡಿದ್ದು, ರಾಜಸ್ಥಾನ ಪೋಲಿಸರು ಎರಡು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಕೇಂದ್ರ ಸಚಿವ ಗಜೇಂದ್ರಸಿಂಗ್ ಶೇಖಾವತ್ ವಿರುದ್ಧವೂ ಎಫ್‌ಐಆರ್ ದಾಖಲಾಗಿದೆ. ಆದರೆ, ಶೇಖಾವತ್ ಅವರು ಆಡಿಯೋದಲ್ಲಿರುವ ಧ್ವನಿ ನನ್ನದಲ್ಲ ಅದು ತಿರುಚಿದ ಆಡಿಯೋ ಕ್ಲಿಪ್, ನಾನು ಯಾವುದೇ ತನಿಖೆಗೂ ಸಿದ್ಧ ಎಂದು ಹೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ದೂರುದಾರ ಹಾಗೂ ಕಾಂಗ್ರೆಸ್ ಮುಖ್ಯ ಸಚೇತಕ ಮಹೇಶ್ ಜೋಷಿ ಆಡಿಯೋ ಕೇಳಿಸಿಕೊಂಡವರೆಲ್ಲರೂ ಅದು ಶೇಖಾವತ್ ಅವರದ್ದು ಎಂದು ಗುರುತಿಸಿದ್ದಾರೆ. ತನಿಖೆಯ ನಂತರ ಎಲ್ಲವೂ ಸ್ಪಷ್ಟವಾಗಲಿದೆ. ಅವರಾಗಿಯೇ ವಿಶೇಷ ಕಾರ್ಯಪಡೆಯ ಬಳಿ ಬಂದು ತಮ್ಮ ಧ್ವನಿ ಮಾದರಿಯನ್ನು ಪರೀಕ್ಷೆಗೆ ಒಪ್ಪಿಸಲಿ ಎಂದಿದ್ದಾರೆ.

**ಪೊಲೀಸರ ಪ್ರವೇಶ:** ಬಂಡಾಯ ಶಾಸಕರು ತಂಗಿದ್ದ ಹರಿಯಾಣ ಮನೇಸರ್‌ನ ರೆಸಾರ್ಟ್‌ಗೆ ರಾಜಸ್ಥಾನ ಪೊಲೀಸರು ಪ್ರವೇಶಿಸಲು ಯತ್ನಿಸಿದಾಗ ಹೈಡ್ರಾಮ ಉಂಟಾಯಿತು. ಬಹಳಷ್ಟು ಕೊಸರಾಟದ ಬಳಿಕ ಅವರಿಗೆ ಒಳ ಪ್ರವೇಶಕ್ಕೆ ಅವಕಾಶ ಮಾಡಿಕೊಡಲಾಯಿತು.

ಆಧಾರ:ಉದಯವಾಣಿ, ದಿನಾಂಕ:18.07.2020